| 18 | [illegible] | 0 | 0 | 0 | 0 | 0 | 0 | [illegible] | 0 | 0 | 0 | 0 | 0 | 0 | 0 | 0 | | [illegible] | 0 | 0 | 0 | 0 | | [illegible] | 0 | 0 | 0 | 0 | 0 | 0 | 0 | 1 | 0 | 1 | [illegible] | 0 |
| | ರಾಮದುರ್ಗ ಕ್ಷೇತ್ರ ಒಟ್ಟು | 1 | 1 | 0 | 5 | 2 | 3 | 12 | 0 | 12 | 1 | 1 | 0 | 2 | 2 | 0 | 5 | 5 | 0 | 11 | 7 | 4 | 7 | 7 | 0 | 1 | 1 | 0 | 1 | 0 | 1 | 33 | 10 | 23 | 32 | 1 |

7

# ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: : 713
ಉತ್ತರ ದಿನಾಂಕ : 09.12.2020

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಿದ್ದರೂ ಯಾವುದೇ ಘಟಕಗಳು ಕಾರ್ಯನಿರ್ವಹಿಸದೆ ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಿದ್ದರೂ ಯಾವುದೇ ಘಟಕಗಳು ಕಾರ್ಯನಿರ್ವಹಿಸದೆ ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br>ಸದರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಿರುವ ಒಟ್ಟು 123 ಘಟಕಗಳ ಪೈಕಿ, 94 ಘಟಕಗಳು ಚಾಲ್ತಿಯಲ್ಲಿದ್ದು, ಉಳಿದ 29 ಘಟಕಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿರುತ್ತದೆ. |
| ಆ. | ಈ ಘಟಕಗಳ ನಿರ್ವಹಣಾ ಕಾರ್ಯಗಳನ್ನು ವಹಿಸಲಾಗಿದ್ದ ಕಂಪನಿಗಳು ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ. | ಬಂದಿದ್ದಲ್ಲಿ ಇಂತಹ ಕಂಪನಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ 29 ಘಟಕಗಳ ಪೈಕಿ, ಅಂತರ್ಗತ (In-built) O&M ಅಡಿ ಹಾಗೂ ಪ್ರತ್ಯೇಕ O&M ಅಡಿ ಇರುವ ಘಟಕಗಳ ವಿವರಗಳು **ಅನುಬಂಧ-1**ರಲ್ಲಿ ಲಗತ್ತಿಸಿದೆ.<br>ಈ 29 ಘಟಕಗಳ ಪೈಕಿ, ಅಂತರ್ಗತ (In-built) O&M ಅಡಿ ಇರುವ 17 ಘಟಕಗಳನ್ನು ಸುಸ್ಥಿತಿಯಲ್ಲಿಡುವಂತೆ ಆಯಾ ಏಜೆನ್ಸಿಗೆ Notice ಮುಖಾಂತರ ತಿಳಿಸಲಾಗಿದ್ದು, Max Aqua ಏಜೆನ್ಸಿಯನ್ನು ಹೊರತುಪಡಿಸಿ ಉಳಿದ ಎಲ್ಲಾ ಏಜೆನ್ಸಿಗಳು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸುತ್ತಿದ್ದಾರೆ. KRIDL ವತಿಯಿಂದ ಹಸ್ತಾಂತರಿಸಿಕೊಂಡಿರುವ ಉಳಿದ 12 ಘಟಕಗಳ ನಿರ್ವಹಣೆಯನ್ನು ಟೆಂಡರ್ ಮುಖಾಂತರ ಪ್ರತ್ಯೇಕ ಏಜೆನ್ಸಿಗೆ ವಹಿಸಲಾಗಿದೆ.<br>ಮುಂದುವರೆದು, Max Aqua ಏಜೆನ್ಸಿಯವರು ಘಟಕಗಳನ್ನು ಸುಸ್ಥಿತಿಯಲ್ಲಿಡಲು ಕ್ರಮ ವಹಿಸದಿದ್ದರಿಂದ, ಸದರಿಯವರ FSD ಅನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಅದರನ್ವಯ ಟೆಂಡರ್ ರದ್ದತಿ ಪ್ರಕ್ರಿಯೆಯಲ್ಲಿದೆ. |

ಸಂ:ಗ್ರಾಕುನೀ&ನೈಇ 85 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

**ಕೆ.ಎಸ್. ಈಶ್ವರಪ್ಪ**
**ಗ್ರಾಮೀಣಾಭಿವೃದ್ಧಿ ಮತ್ತು**
**ಪಂಚಾಯತ್ ರಾಜ್ ಸಚಿವರು**

## ಅನುಬಂಧ-1

| Sl. No. | Agency responsible for installation | Total No. of Plants installed | No of plants working | No of plants temporarily not working | Remarks |
|---|---|---|---|---|---|
| 1 | Max Aqua | 39 | 30 | 9 | Inbuilt O&M |
| 2 | Water Life | 7 | 3 | 4 | Inbuilt O&M |
| 3 | Tata Projects | 2 | 2 | 0 | Inbuilt O&M |
| 4 | Others (Co operative society, SC/ST Agencies etc.) | 12 | 8 | 4 | Inbuilt O&M |
| 5 | KRIDL | 63 | 51 | 12 | 63 plants were taken over from KRIDL. Further, Separate O&M tender called was called & is entrusted to Shri. Laxmi Venkateshwara Agency |
| **Total** | | **123** | **94** | **29** | |

8

<u>ಕರ್ನಾಟಕ ವಿಧಾನ ಸಭೆ</u>

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 614 |
| ಸದಸ್ಯರ ಹೆಸರು | : | ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ | : | 09-12-2020 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಹಾಸನ ನಗರದಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ನರ್ಸಿಂಗ್ ಕಾಲೇಜು, ಸರ್ಕಾರಿ ಐ.ಟಿ.ಐ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಪದವಿ ಪೂರ್ವ ಕಾಲೇಜುಗಳು ಹಾಗೂ ಇತರೆ ಹಲವಾರು ವಿದ್ಯಾಸಂಸ್ಥೆಗಳಿದ್ದು, ಪ್ರತಿದಿನ ಸುತ್ತಮುತ್ತಲ ತಾಲ್ಲೂಕು ಕೇಂದ್ರಗಳಿಂದ ಹಾಗೂ ಗ್ರಾಮೀಣ ಪ್ರದೇಶಗಳಿಂದ ಸುಮಾರು 15-20 ಸಾವಿರ ಹೆಣ್ಣು ಮಕ್ಕಳು ಹಾಸನ ನಗರಕ್ಕೆ ಬರುತ್ತಿದ್ದು, ಇವರುಗಳಿಗೆ ಸರಿಯಾದ ಸಾರಿಗೆ ಸೌಲಭ್ಯ ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಾಸನ ನಗರವು ಮುಖ್ಯ ಶೈಕ್ಷಣಿಕ ಕೇಂದ್ರವಾಗಿದ್ದು, ಹಾಸನ ನಗರಕ್ಕೆ ಬರುವ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹಾಸನ ಸುತ್ತಮುತ್ತಲಿನ ತಾಲ್ಲೂಕು ಕೇಂದ್ರಗಳು ಹಾಗೂ ಗ್ರಾಮಾಂತರ ಪ್ರದೇಶಗಳಿಂದ ಹಾಸನ ನಗರಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. |
| ಆ. | ಬಂದಿದ್ದಲ್ಲಿ, ಇವರಿಗೆ ಬಸ್ ಸೌಕರ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಕ.ರಾ.ರ.ಸಾ.ನಿಗಮದ ಹಾಸನ ಮತ್ತು ಚಿಕ್ಕಮಗಳೂರು ವಿಭಾಗದ ವಿವಿಧ ಘಟಕಗಳಿಂದ ಹಾಸನ ಜಿಲ್ಲೆ ಸುತ್ತಮುತ್ತಲಿನ ತಾಲ್ಲೂಕು ಕೇಂದ್ರಗಳು ಮತ್ತು ಗ್ರಾಮಾಂತರ ಪ್ರದೇಶಗಳಿಂದ ಹಾಸನ ನಗರಕ್ಕೆ ಸಾಮಾನ್ಯ ಸಾರಿಗೆ ಮತ್ತು ವೇಗದೂತ ಸಾರಿಗೆಗಳನ್ನು ಆಚರಣೆ ಮಾಡಲಾಗುತ್ತಿದ್ದು, ವಿವರ ಕೆಳಕಂಡಂತಿದೆ: |

| ತಾಲ್ಲೂಕು ಕೇಂದ್ರಗಳು | ಹಾಸನ ನಗರ ಮತ್ತು ಹೊರವಲಯಗಳಿಗೆ ಆಚರಣೆಯಲ್ಲಿರುವ ಸುತ್ತುವಳಿಗಳ ಸಂಖ್ಯೆ |
|---|---|
| ಅರಸೀಕೆರೆ | 99 |
| ಅರಕಲಗೂಡು | 98 |
| ಆಲೂರು | 56 |
| ಬೇಲೂರು | 146 |
| ಚನ್ನರಾಯಪಟ್ಟಣ | 103 |
| ಹಾಸನ | 230 |
| ಹೊಳೆನರಸೀಪುರ | 139 |
| ಸಕಲೇಶಪುರ | 63 |
| **ಒಟ್ಟು** | **934** |

| | | |
|---|---|---|
| | | ಇದಲ್ಲದೆ, ಹಾಸನ-ಆಲೂರು ಮಾರ್ಗದಲ್ಲಿ 08 ನಗರ ಸಾರಿಗೆ ಅನುಸೂಚಿಗಳಿಂದ 108 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಸದರಿ ಸಾರಿಗೆಗಳ ಅನುಕೂಲವನ್ನು ಹಾಸನ ಸುತ್ತಮುತ್ತಲಿನ ತಾಲ್ಲೂಕು ಹಾಗೂ ಗ್ರಾಮಾಂತರ ಪ್ರದೇಶಗಳ ವಿದ್ಯಾರ್ಥಿಗಳು, ನೌಕರರು, ರೈತರು ಹಾಗೂ ಸಾರ್ವಜನಿಕ ಪ್ರಯಾಣಿಕರು ಪಡೆದುಕೊಳ್ಳುತ್ತಿದ್ದಾರೆ.<br><br>ಪ್ರಸ್ತುತ ಕೋವಿಡ್-19 ಹಿನ್ನೆಲೆಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲಾ-ಕಾಲೇಜುಗಳು/ವಿದ್ಯಾಸಂಸ್ಥೆಗಳು ಪ್ರಾರಂಭವಾಗದಿರುವುದರಿಂದ ಪ್ರಯಾಣಿಕರ ಲಭ್ಯತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಪ್ರಯಾಣಿಕರ/ವಿದ್ಯಾರ್ಥಿಗಳ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. |

ಸಂಖ್ಯೆ: ಟಿಡಿ 213 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

(9)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 855
ಸದಸ್ಯರ ಹೆಸರು : ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ)
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ಉತ್ತರಿಸಬೇಕಾದ ದಿನಾಂಕ : 09-12-2020

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಸರ್ಕಾರಿ ನೌಕರರನ್ನಾಗಿ ನೇಮಿಸಿಕೊಳ್ಳುವ ಕುರಿತು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು) | ಮೂಲತ: ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ನಿಯಮಗಳನ್ವಯ ಅಂಗವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಸೇವೆಯು ಗೌರವಧನ ಸೇವೆಯಾಗಿದ್ದು, ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಸರ್ಕಾರಿ ನೌಕರರನ್ನಾಗಿ ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ. | ಸರ್ಕಾರಿ ನೌಕರರಂತೆ 60 ವರ್ಷಕ್ಕೆ ನಿವೃತ್ತಿಗೊಳಿಸಿದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಪಿಂಚಣಿ ಜಾರಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ನ್ಯಾಷನಲ್ ಪೆನ್ಷನ್ ಸಿಸ್ಟಮ್-ಲೈಟ್ (NPS-LITE)ಯಡಿಯಲ್ಲಿ ನೊಂದಾಯಿಸಲಾದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಪಿಂಚಣಿ ಸೌಲಭ್ಯ ನೀಡಲಾಗುತ್ತಿದೆ. |
| ಇ. | ಮಿನಿ ಅಂಗನವಾಡಿ ಕಾರ್ಯಕರ್ತೆಯರನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಮಿನಿ ಅಂಗನವಾಡಿ ಕಾರ್ಯಕರ್ತೆಯರನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿಯಿರುವ ಹಾಗೂ ಹೊಸ ಅಂಗನವಾಡಿ ಕೇಂದ್ರ ಪ್ರಾರಂಭಿಸುತ್ತಿರುವ ಗ್ರಾಮದ ಯೋಜನಾ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಮಿನಿ ಅಂಗನವಾಡಿ ಕಾರ್ಯಕರ್ತೆಯರು ಇದ್ದು ಅವರು ಆ ಅಂಗನವಾಡಿ ಕೇಂದ್ರದಿಂದ 3 ಕಿ.ಮೀ. ವ್ಯಾಪ್ತಿಯೊಳಗೆ ವಾಸಿಸುತ್ತಿದ್ದು, ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ ಆ ಅಂಗನವಾಡಿ ಕೇಂದ್ರದ ಕಾರ್ಯಕರ್ತೆ ಹುದ್ದೆಗೆ ಬೇರೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸದೇ ಆದ್ಯತೆ ಮೇರೆಗೆ ಸದರಿ ಮಿನಿ ಅಂಗನವಾಡಿ ಕಾರ್ಯಕರ್ತೆಯರನ್ನು ಆಯ್ಕೆ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| ಈ | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಕುಟುಂಬಗಳ ಆರೋಗ್ಯ ವಿಮೆ (ಇ.ಎಸ್.ಐ) ಸೌಲಭ್ಯ ಒದಗಿಸುವ ಕುರಿತು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ಸಂಪೂರ್ಣ ವಿವರ ನೀಡುವುದು) | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಗೌರವಧನ ಸೇವೆಗೆ ಸೇರಿರುವುದರಿಂದ ಕುಟುಂಬಗಳ ಆರೋಗ್ಯ ವಿಮೆ(ESI) ಒದಗಿಸಲು ಅವಕಾಶವಿರುವುದಿಲ್ಲ. |

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತುವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 211 ಐಸಿಡಿ 2020

(10)

<u>ಕರ್ನಾಟಕ ವಿಧಾನ ಸಭೆ</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 485

ಸದಸ್ಯರ ಹೆಸರು : ಡಾ॥ ಅವಿನಾಶ್ ಉಮೇಶ್ ಜಾಧವ್ (ಚಿಂಚೋಳಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 09-12-2020

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕಲಬುರಗಿ ಜಿಲ್ಲೆಯ ಚಿಂಚೋಳಿ ಬಸ್ ಘಟಕದಲ್ಲಿ ಅವಶ್ಯಕ ಬಸ್ಸುಗಳು ಹಾಗೂ ಸಿಬ್ಬಂದಿಗಳ ಕೊರತೆಯಿಂದ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಲಬುರಗಿ ಜಿಲ್ಲೆಯ ಚಿಂಚೋಳಿ ಘಟಕದಲ್ಲಿ ಕೋವಿಡ್-19 ಪೂರ್ವದಲ್ಲಿ 66 ಅನುಸೂಚಿಗಳು ಮತ್ತು ಕೋವಿಡ್-19 ನಂತರ 59 ಅನುಸೂಚಿಗಳು ಕಾರ್ಯಾಚರಣೆಯಲ್ಲಿರುತ್ತವೆ.<br><br>ಪ್ರಸ್ತುತ ಕಾರ್ಯಾಚರಣೆಗೆ ಸಿಬ್ಬಂದಿ ಮತ್ತು ಮೇಲ್ವಿಚಾರಕರ ಕೊರತೆಯಿರುವುದಿಲ್ಲ. ಪ್ರಸ್ತುತ ಕಾರ್ಯಾಚರಣೆಗೆ 14 ವಾಹನಗಳು ಹೆಚ್ಚುವರಿಯಾಗಿ ಘಟಕದಲ್ಲಿ ಲಭ್ಯವಿರುತ್ತವೆ. ಎಲ್ಲಾ ವಾಹನಗಳಿಗೆ ಆಗಿಂದಾಗ್ಗೆ ದುರಸ್ಥಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. |
| ಆ. | ಬಂದಿದ್ದಲ್ಲಿ, ಈ ಕುಂದು ಕೊರತೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದೇ; | ಸಾರ್ವಜನಿಕರ ಬೇಡಿಕೆಗನುಸಾರ ಬಸ್ಸುಗಳ ವ್ಯವಸ್ಥೆ ಮಾಡಲಾಗಿರುತ್ತದೆ. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕೋವಿಡ್-19ರ ಮುಂಚಿತವಾಗಿ ಹೆಚ್ಚುವರಿಯಾಗಿ 07 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಆದರೆ ಶಾಲೆಗಳು/ಪದವಿ ಪೂರ್ವ ಕಾಲೇಜುಗಳು ಪ್ರಾರಂಭವಾಗದೇ ಇರುವುದರಿಂದ ಸದರಿ 07 ಅನುಸೂಚಿಗಳನ್ನು ಪ್ರಾರಂಭ ಮಾಡಿರುವುದಿಲ್ಲ.<br><br>ಶಾಲೆಗಳು/ಪದವಿ ಪೂರ್ವ ಕಾಲೇಜುಗಳು ಪ್ರಾರಂಭವಾದ ನಂತರ ಮತ್ತು ಸಾರ್ವಜನಿಕ ಪ್ರಯಾಣಿಕರ ಬೇಡಿಕೆಯನುಸಾರ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು. |
| ಇ. | ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು) | ಪ್ರಸ್ತುತ ಕಾರ್ಯಾಚರಣೆಗೆ ಯಾವುದೇ ಸಿಬ್ಬಂದಿ ಮತ್ತು ವಾಹನಗಳ ಕೊರತೆಯಿರುವುದಿಲ್ಲ. |

ಸಂಖ್ಯೆ: ಟಿಡಿ 212 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

11

# ಕರ್ನಾಟಕ ವಿಧಾನ ಸಭೆ

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಸಿದ್ದು ಸವದಿ (ತೇರದಾಳ) |
| ಚುಕ್ಕೆ ಗುರುತಿನ ಸಂಖ್ಯೆ | : | 487 |
| ಉತ್ತರಿಸುವ ಸಚಿವರು | : | ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 09.12.2020 |

| ಕ್ರ.ಸಂ | ಪ್ರಶ್ನೆ | ಉತ್ತರ | Answer |
|---|---|---|---|
| ಅ) | ಕರೋನಾ ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುವುದನ್ನು ತಡೆ ಗಟ್ಟಲು ಜಾರಿಗೊಳಿಸಲಾಗಿದ್ದ ಲಾಕ್ ಡೌನ್ ಅವಧಿಯಲ್ಲಿ ಸುಮಾರು 06 ತಿಂಗಳುಗಳವರೆಗೆ ನೇಕಾರರ ಪವರ್ ಲೂಮ್ ಗಳು ಸಂಪೂರ್ಣ ಸ್ಥಗಿತ ಗೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. | Yes |
| ಆ) | ಬಂದಿದ್ದಲ್ಲಿ, ಸದರಿ ಉದ್ಯೋಗದ ಮೇಲೆ ಅವಲಂಬಿತರಾದ ನೇಕಾರರಿಗೆ ದೊಡ್ಡಮಟ್ಟದ ಹಾನಿಯುಂಟಾಗಿದ್ದು, ಲಾಕ್ ಡೌನ್ ನಿಂದ ಸೀರೆಗಳು ಮಾರಾಟವಾಗದೇ ನೇಕಾರರು ಮಜೂರಿ ಇಲ್ಲದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | "ಕೋವಿಡ್-19 ಪ್ರಯುಕ್ತ ವಿದ್ಯುತ್ ಮಗ್ಗ ನೇಕಾರರಿಗೆ ಆರ್ಥಿಕ ಬೆಂಬಲ ನೀಡುವ" ಸಂಬಂಧ ಸರ್ಕಾರದ ಆದೇಶ ಸಂಖ್ಯೆ:CI 49 JAKY 2020 ದಿನಾಂಕ: 26.05.2020ರನ್ವಯ ರಾಜ್ಯದಲ್ಲಿರುವ 1.25 ಲಕ್ಷ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಪ್ರತಿ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಮಾತ್ರ ಅನ್ವಯಿಸುವಂತೆ ರೂ.2000/-ಗಳ ಆರ್ಥಿಕ ನೆರವನ್ನು ನೇರ ನಗದು ವರ್ಗಾವಣೆ ಮುಖಾಂತರ ನೀಡಲು ಆದೇಶವನ್ನು ಹೊರಡಿಸಲಾಗಿರುತ್ತದೆ(ಪ್ರತಿ ಲಗತ್ತಿಸಿದೆ).<br><br>ಸದರಿ ಯೋಜನೆಯಡಿ ಇದುವರೆಗೆ 56449 ನೇಕಾರರು ಅರ್ಜಿಗಳನ್ನು ನೊಂದಾಯಿಸಿದ್ದು, ಇದುವರೆಗೆ ರೂ.960.42 ಲಕ್ಷಗಳ ಪರಿಹಾರಧನವನ್ನು ನೇರ ನಗದು ವರ್ಗಾವಣೆ ಮುಖಾಂತರ ವರ್ಗಾಯಿಸಲಾಗಿರುತ್ತದೆ. | The State Government vide GO No. CI 49 JAKY 2020, Dated:26.05.2020 has ordered to give one time Rs.2,000/- relief to one person in one unit for estimated 1.25 lakh employees of power looms in the State through direct benefit transfer(copy enclosed).<br><br>Till now, 56449 power looms weavers have been registered. Currently an amount of Rs.960.42 lakhs relief has been transferred through Direct Benefit Transfer. |

| | | | |
|---|---|---|---|
| ಇ) | ಲಾಕ್ ಡೌನ್ ನಿಂದ ಮಾರಾಟವಾಗದೇ ಉಳಿದಿರುವ ಸುಮಾರು 10 ಲಕ್ಷ ಸೀರೆಗಳನ್ನು ಸರ್ಕಾರವು ಖರೀದಿಸಿ ಇತರೆ ಇಲಾಖೆಯಲ್ಲಿ ಕೆಲಸ ಮಾಡುವವರಿಗೆ ಹಂಚಲು ಬೇಡಿಕೆ ಯಿಟ್ಟಿರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಹೌದು | Yes |
| ಈ) | ಹಾಗಿದ್ದಲ್ಲಿ, ಪ್ರಸ್ತುತ ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಬಡ ನೇಕಾರರಿಗೆ ಸರ್ಕಾರ ಯಾವ ರೀತಿ ನ್ಯಾಯ ಒದಗಿಸಲಾಗುವುದು? | ನೇಕಾರರು ಉತ್ಪಾದಿಸಿ ವಿಲೆಯಾಗದೇ ದಾಸ್ತಾನಾಗಿರುವ ಸೀರೆಗಳನ್ನು ಖರೀದಿಸಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು, ಪೌರಾಡಳಿತ ಇಲಾಖೆಯ ವ್ಯಾಪ್ತಿಗೆ ಬರುವ ಪೌರ ಕಾರ್ಮಿಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಆಶಾ ಕಾರ್ಯಕರ್ತೆಯರು ಹಾಗೂ ಅಗ್ನಿಶಾಮಕ, ನಾಗರಿಕ ಸಂರಕ್ಷಣೆ ಮತ್ತು ಹೋಂ ಗಾರ್ಡ್ ಇಲಾಖೆ ವ್ಯಾಪ್ತಿಗೆ ಬರುವ ಹೋಂ ಗಾರ್ಡ್ಸ್ ಮತ್ತು ನಾಗರಿಕ ಸಂರಕ್ಷಕರ ಸಂಖ್ಯೆಯನ್ನಾಧರಿಸಿ ಪ್ರತಿಯೊಬ್ಬ ಮಹಿಳಾ ಸಿಬ್ಬಂದಿಗೆ ರೂ.500/- ರಿಂದ ರೂ.600/- ರವರೆಗಿನ ಮೌಲ್ಯದ ತಲಾ 2 ಸೀರೆಯಂತೆ ಒಟ್ಟು 6 ಲಕ್ಷ ಸೀರೆಗಳಿಗೆ ರೂ.36.00 ಕೋಟಿ ಅನುದಾನ ನೀಡಲು ಪ್ರಸ್ತಾಪಿಸಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ತಿರಸ್ಕರಿಸಿದ್ದರ ಹಿನ್ನೆಲೆಯಲ್ಲಿ ಮತ್ತೊಮ್ಮೆ ಮರು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ. | A proposal has been sent to the Finance Department to grant a sum of Rs.36.00 crores to procure 6 lakhs sarees of worth Rs.500/- to Rs.600/- each in order to clear the unsold stock of the weavers and to distribute the same to Anganawadi Workers, Asha Workers, Municipal Workers, Home Gaurds who fought against Corona pandemic as warriors. However, the Finance Department rejected the proposal.<br><br>Currently, the same proposal has been re-submitted to the Finance Department for reconsideration. |

ಸಂ: ವಾಕ್ಯ 253 JAKE 2020

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್–19 ಪ್ರಯುಕ್ತ ವಿದ್ಯುತ್ ಮಗ್ಗ ನೇಕಾರರಿಗೆ ಆರ್ಥಿಕ ಬೆಂಬಲ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ವಾಕೈ 47 JAKY 2020, ದಿನಾಂಕ: 15.05.2020.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈಜಇ/ ಟಿ1/ ಕೋವಿಡ್ –19/ ವಿ.ಪ/ 2020–21, ದಿನಾಂಕ:07.05.2020.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈಜಇ/ ಟಿ1/ ಕೋವಿಡ್ –19/ ವಿ.ಮಗ್ಗ.ಪರಿಹಾರ/ 2020–21, ದಿನಾಂಕ:19.05.2020.

***********

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಪ್ರಸ್ತುತ ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಆಗಿರುವ ಹಿನ್ನೆಲೆಯಲ್ಲಿ, ನೇಕಾರರು ಸಂಕಷ್ಟದಲ್ಲಿರುವುದರಿಂದ, ಕೈಮಗ್ಗ ನೇಕಾರರಿಗೆ ನೇಕಾರರ ಸಮ್ಮಾನ್ ಯೋಜನೆಯನ್ನು ಘೋಷಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ರವರು ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಪರಿಸ್ಥಿತಿಯಲ್ಲಿ ವಿದ್ಯುತ್ ಮಗ್ಗ ನೇಕಾರರೂ ಸಹ ಸಂಕಷ್ಟದಲ್ಲಿರುವುದರಿಂದ ಈ ಸಮಯದಲ್ಲಿ ರಾಜ್ಯದಲ್ಲಿರುವ ವಿದ್ಯುತ್ ಮಗ್ಗ ನೇಕಾರರಿಗೆ ತಲಾ ರೂ.2000/– (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ಆರ್ಥಿಕ ಬೆಂಬಲವನ್ನು ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ವಾಕೈ 49 JAKY 2020 ದಿನಾಂಕ:26.05.2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಪ್ರಸ್ತುತ ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ಭಾರತದಾದ್ಯಂತ ಲಾಕ್ ಡೌನ್ ಪರಿಸ್ಥಿತಿಯಲ್ಲಿ ವಿದ್ಯುತ್ ಮಗ್ಗ ನೇಕಾರರೂ ಸಹ ಸಂಕಷ್ಟದಲ್ಲಿರುವುದರಿಂದ ಕರ್ನಾಟಕ ರಾಜ್ಯದಲ್ಲಿರುವ 1.25 ಲಕ್ಷ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಪ್ರತಿ ವಿದ್ಯುತ್ ಚಾಲಿತ ಘಟಕ(ಮಗ್ಗ)ಗಳಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿಗೆ ಮಾತ್ರ

..2

ಅನ್ವಯಿಸುವಂತೆ ರೂ.2000/- (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ಒಟ್ಟು ರೂ.25.00 ಕೋಟಿಗಳನ್ನು ಪರಿಹಾರ ಧನವನ್ನಾಗಿ ಮಂಜೂರು ಮಾಡಿ ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ:-

1. ಫಲಾನುಭವಿ ಅರ್ಹತೆ:

- ಫಲಾನುಭವಿಯು ವಿದ್ಯುತ್ ಮಗ್ಗ ಘಟಕದಲ್ಲಿ ಕೂಲಿ ಕಾರ್ಮಿಕನಾಗಿ ಅಥವಾ ಸ್ವತಃ ಕಾರ್ಮಿಕನಾಗಿ ಕೆಲಸ ಮಾಡುತ್ತಿರುವವರು.
- 01 ರಿಂದ 20 ಹೆಚ್.ಪಿ. ವರೆಗೆ ವಿದ್ಯುತ್ ರಿಯಾಯಿತಿ ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ವಿದ್ಯುತ್ ಮಗ್ಗ ಘಟಕಗಳಿಗೆ ಮಾತ್ರ ಅನ್ವಯಿಸುತ್ತದೆ.

2. ಹಣಕಾಸಿನ ನೆರವು:

- ಪ್ರತಿ ವಿದ್ಯುತ್ ಚಾಲಿತ ಘಟಕ (ಮಗ್ಗ)ದಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿಗೆ ಮಾತ್ರ ಅನ್ವಯಿಸುವಂತೆ ರೂ.2000/- ಗಳನ್ನು ನೀಡಲು ಉದ್ದೇಶಿಸಲಾಗಿದೆ.
- ಫಲಾನುಭವಿಗಳ ಆಧಾರ್ ಕಾರ್ಡ್‌ನ ವಿವರಗಳನ್ನು ಪಡೆದುಕೊಂಡು, ಹಣವನ್ನು ಖಜಾನೆ-2ರಲ್ಲಿರುವ ನೇರ ನಗದು ನಿರ್ವಹಣೆ (DBT) ಮುಖಾಂತರ ಪಾವತಿಸತಕ್ಕದ್ದು.
- ಫಲಾನುಭವಿಗಳ ವಿವರಗಳನ್ನು ಸಂಗ್ರಹಿಸಲು ಪ್ರತ್ಯೇಕವಾಗಿ ತಂತ್ರಾಂಶವೇನಾದರೂ ಅಗತ್ಯವಿದ್ದಲ್ಲಿ ಅದನ್ನು ಜವಳಿ ಅಭಿವೃದ್ಧಿ ಆಯುಕ್ತರ ಕಚೇರಿಯಲ್ಲಿಯೇ ಅಥವಾ ಇ-ಆಡಳಿತದ ಮುಖಾಂತರ ಅಭಿವೃದ್ಧಿಪಡಿಸತಕ್ಕದ್ದು.
- ಆರ್ಥಿಕ ಇಲಾಖೆಯು ಸೂಚಿಸಿರುವಂತೆ, ಒಟ್ಟು ಘಟಕಗಳ ಸಂಖ್ಯೆ 1.25 ಲಕ್ಷ ಹಾಗೂ ವಿದ್ಯುತ್ ಚಾಲಿತ ಘಟಕದಲ್ಲಿ ಕೆಲಸ ಮಾಡುತ್ತಿರುವ ಒಬ್ಬ ಕೂಲಿ ಕಾರ್ಮಿಕರಿಗೆ ಒಂದು ಬಾರಿ ನೀಡುವ ಪರಿಹಾರ ಧನದ ಆರ್ಥಿಕ ಹೊರೆಯು ರೂ.25.00 ಕೋಟಿ ಮೀರತಕ್ಕದ್ದಲ್ಲ.

3. ಫಲಾನುಭವಿಗಳು ಸಲ್ಲಿಸಬೇಕಾದ ದಾಖಲೆಗಳು:

- ಸಾಮಾನ್ಯ ನಮೂನೆಯಲ್ಲಿ ಫಲಾನುಭವಿ(ಕೂಲಿ ಕಾರ್ಮಿಕರ)ಯ ಅರ್ಜಿ(ಆನ್ ಲೈನ್ ಮುಖಾಂತರ).
- ಕೂಲಿ ಕಾರ್ಮಿಕರ ಆಧಾರ್ ಕಾರ್ಡ್ ಪ್ರತಿ.
- ಕೂಲಿ ಕಾರ್ಮಿಕರ ಆಧಾರ್ ಸಂಖ್ಯೆ ಲಿಂಕ್ ಮಾಡಿದ ಬ್ಯಾಂಕ್ ಖಾತೆಯ ಪಾಸ್ ಬುಕ್ ಪ್ರತಿ.
- ಕೂಲಿ ಕಾರ್ಮಿಕರು ವಿದ್ಯುತ್ ಮಗ್ಗ ಘಟಕದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ದಾಖಲಾತಿ(ಫೋಟೋ).
- ಘಟಕದ ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್.ನಂ & ಕಳೆದ ತಿಂಗಳ ವಿದ್ಯುತ್ ಬಿಲ್.
- ಘಟಕದ ಉದ್ಯೋಗ್ ಆಧಾರ್ / ಪಿ.ಎಂ.ಟಿ/ ಉದ್ದಿಮೆದಾರರ ಪರವಾನಗಿ ಪತ್ರ.
- ಘಟಕದಲ್ಲಿ ಕಾರ್ಯನಿರ್ವಹಿಸುವ ಕೂಲಿ ನೇಕಾರರ ವಿವರಗಳನ್ನು ಒಳಗೊಂಡ ಮಜೂರಿ ಪಾವತಿಯ ಪ್ರತಿ (ಲಭ್ಯವಿದ್ದಲ್ಲಿ).
- ಮಾಲೀಕರಿಂದ ಕೂಲಿ ನೇಕಾರರ ಮಾಹಿತಿಯ ಕುರಿತು ರೂ.20/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆ ಪತ್ರ.

4. ಅನುಷ್ಠಾನ

- ಕೈಮಗ್ಗ ಮತ್ತು ಜವಳಿ ಇಲಾಖೆಯ ಜಿಲ್ಲಾ ಮಟ್ಟದ ಉಪ / ಸಹಾಯಕ ನಿರ್ದೇಶಕರುಗಳು ಕೂಲಿ ಕಾರ್ಮಿಕರು ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಸಲ್ಲಿಸುವ ಕುರಿತು ಅಗತ್ಯ ಸೇವೆ ಒದಗಿಸುವುದು.

..3

- ರೈಮಗ್ಗ ಮತ್ತು ಜವಳಿ ಇಲಾಖೆಯ ಜಿಲ್ಲಾ ಮಟ್ಟದ ಉಪ / ಸಹಾಯಕ ನಿರ್ದೇಶಕರುಗಳು ಜವಳಿ ಅಭಿವೃದ್ಧಿ ಆಯುಕ್ತರ ಕಛೇರಿಯ ಮಾರ್ಗದರ್ಶನಗಳಡಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.
- ಯೋಜನೆಯನ್ನು ಯಾವ ಫಲಾನುಭವಿಗಳಿಗಾಗಿ ಘೋಷಣೆ ಮಾಡಲಾಗಿದೆಯೋ ಅವರನ್ನು ಮಾತ್ರ ಪರಿಗಣಿಸತಕ್ಕದ್ದು.
- ಫಲಾನುಭವಿಗಳ ಮಾಹಿತಿಯನ್ನು ಸಂಗ್ರಹಿಸಲು ಸೂಕ್ತ ಕ್ರಮಕೈಗೊಳ್ಳತಕ್ಕದ್ದು.
- ಫಲಾನುಭವಿಗಳು ಪುನರಾವರ್ತನೆಯಾಗದಂತೆ ಎಚ್ಚರವಹಿಸತಕ್ಕದ್ದು.
- ವಿಭಾಗ ಮಟ್ಟದ ಅಧಿಕಾರಿಗಳು ಯೋಜನೆಯ ಅನುಷ್ಠಾನದ ಕುರಿತು ಪರಿವೀಕ್ಷಣೆ ಮಾಡತಕ್ಕದ್ದು.

ಪ್ರಸ್ತಾವಿತ ಯೋಜನೆಗೆ ತಗಲುವ ವೆಚ್ಚವನ್ನು 2020-21ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕಶೀರ್ಷಿಕೆ:2851-00-103-0-62-106 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆ ನೀಡಿರುವ ಸಹಮತಿ ಸಂಖ್ಯೆ: ಆಇ 130 ವೆಚ್ಚ-1, 2020, ದಿನಾಂಕ: 15.05.2020 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
26/5/2020
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)

<u>ಇವರಿಗೆ,</u>

ಜಂಟಿ ನಿರ್ದೇಶಕರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು ಇವರಿಗೆ- ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ 100 ಪ್ರತಿಗಳನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಒದಗಿಸುವಂತೆ ಕೋರಿದೆ.

<u>ಪ್ರತಿಗಳು:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ)/ (ಇ & ಆರ್.ಎಸ್.ಎ) (ಎ&ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೆಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು-560 020.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಪ್ರಿಯದರ್ಶಿನಿ, ನೇಕಾರ ಭವನ, ವಿದ್ಯಾನಗರ ಹುಬ್ಬಳ್ಳಿ-580 031.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಮೊದಲನೇ ಮಹಡಿ, ವಸ್ತು ಪ್ರದರ್ಶನ ಕೇಂದ್ರ, ಕಣಬುರಗಿ ಕೈಗಾರಿಕಾ ಪ್ರದೇಶ, ಬೆಳಗಾವಿ- 590 015.
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಜಂಟಿ ನಿರ್ದೇಶಕರು, ಜಿಲ್ಲಾ ಖಜಾನೆ, ಕೆ.ಆರ್.ವೃತ್ತ, ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-1, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಎಂ.ಎಸ್.ಎಂ.ಇ & ಗಣಿ), ವಿಕಾಸ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ವಿಧಾನ ಸಭೆ

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 475 |
| ಸದಸ್ಯರ ಹೆಸರು | : | ಶ್ರೀ ಹರ್ಷವರ್ಧನ್ ಬಿ. (ನಂಜನಗೂಡು) |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ | : | 09-12-2020 |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಕೋವಿಡ್-19ರ ಹಿನ್ನೆಲೆಯಲ್ಲಿ ಮಾರ್ಚ್-2020 ರಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಎಷ್ಟು ಬಸ್‌ಗಳನ್ನು/ ಮಾರ್ಗಗಳನ್ನು ಸ್ಥಗಿತಗೊಳಿಸಲಾಗಿತ್ತು;</td><td>
ಕೋವಿಡ್-19ನಿಂದಾಗಿ ದಿನಾಂಕ:23.03.2020ರಿಂದ ದಿನಾಂಕ: 17.05.2020ರವರೆಗೆ ಸಂಪೂರ್ಣ ಲಾಕ್‌ಡೌನ್ ಅನ್ನು ಘೋಷಣೆ ಮಾಡಿದ್ದರ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲಾದ ಬಸ್/ಅನುಸೂಚಿಗಳ ಮಾಹಿತಿ ಈ ಕೆಳಕಂಡಂತಿದೆ:
<table>
<tr><th>ಸಂಸ್ಥೆಗಳು</th><th>ಸ್ಥಗಿತಗೊಳಿಸಲಾದ ಬಸ್/ ಅನುಸೂಚಿಗಳ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>8176</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>4671</td></tr>
<tr><td>ಈ.ಕ.ರ.ಸಾ.ಸಂಸ್ಥೆ</td><td>4265</td></tr>
</table>
ಬೆಂ.ಮ.ಸಾ.ಸಂಸ್ಥೆ:<br>
ಸಂಸ್ಥೆಯ ಸಾರಿಗೆಗಳ ಕಾರ್ಯಾಚರಣೆಯನ್ನು ದಿನಾಂಕ 23.03.2020 ರಿಂದ 18.05.2020 ರವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ಮಾಹೆವಾರು ಸ್ಥಗಿತಗೊಳಿಸಲಾಗಿರುವ ಸಾರಿಗೆಗಳ ವಿವರಗಳು ಕೆಳಕಂಡಂತಿವೆ.
<table>
<tr><th>ಮಾಹೆ</th><th>ಸ್ಥಗಿತಗೊಳಿಸಲಾದ ಅನುಸೂಚಿಗಳು</th></tr>
<tr><td>ಏಪ್ರಿಲ್-2020</td><td>5,922</td></tr>
<tr><td>ಮೇ-2020<br>(19-05-2020 ರಿಂದ<br>31-05-2020ರವರೆಗೆ)</td><td>4,093</td></tr>
<tr><td>ಜೂನ್-2020</td><td>1,892</td></tr>
<tr><td>ಜುಲೈ-2020</td><td>4,199</td></tr>
<tr><td>ಆಗಸ್ಟ್ -2020</td><td>3,338</td></tr>
<tr><td>ಸೆಪ್ಟೆಂಬರ್-2020</td><td>2,109</td></tr>
<tr><td>ಅಕ್ಟೋಬರ್ -2020</td><td>1,827</td></tr>
<tr><td>ನವೆಂಬರ್ -2020</td><td>1,539</td></tr>
</table>
</td></tr>
<tr><td>ಆ.</td><td>ಸ್ಥಗಿತಗೊಳಿಸಲಾಗಿದ್ದ ಮಾರ್ಗಗಳನ್ನು ಪುನರಾರಂಭಿಸಲಾಗಿದೆಯೇ; ಪುನರಾರಂಭಿಸದಿದ್ದರೆ, ಕಾರಣವೇನು;</td><td>
ಸ್ಥಗಿತಗೊಳಿಸಲಾಗಿದ್ದ ಮಾರ್ಗಗಳನ್ನು ಸಾರಿಗೆ ಸಂಸ್ಥೆಗಳು ಈ ಕೆಳಕಂಡಂತೆ ಪುನರಾರಂಭಿಸುತ್ತಿವೆ:<br><br>
ಕ.ರಾ.ರ.ಸಾ.ನಿಗಮ: ಪ್ರಸ್ತುತ ಸರಾಸರಿಯಾಗಿ ಪ್ರತಿ ದಿನ 5434 ಬಸ್‌ಗಳನ್ನು ಕಾರ್ಯಚರಿಸಲಾಗುತ್ತಿದೆ.<br><br>
ಬೆಂ.ಮ.ಸಾ.ಸಂಸ್ಥೆ: ನವಂಬರ್-2020ರ ಮಾಹೆಯಲ್ಲಿ ಸರಾಸರಿ 4555 ಸಾಮಾನ್ಯ ಮತ್ತು 65 ಹವಾನಿಯಂತ್ರಿತ, ಒಟ್ಟಾರೆ 4620 ಅನುಸೂಚಿಗಳನ್ನು ಕಾರ್ಯಾಚರಿಸಲಾಗಿರುತ್ತದೆ.<br><br>
ವಾ.ಕ.ರ.ಸಾ.ಸಂಸ್ಥೆ: ನವಂಬರ್-2020ರ ಅಂತ್ಯಕ್ಕೆ ಪ್ರತಿ ದಿನ 4092 ಅನುಸೂಚಿ /ಬಸ್‌ಗಳನ್ನು ಪುನರಾರಂಭಿಸಲಾಗಿದೆ.<br><br>
ಈ.ಕ.ರ.ಸಾ.ಸಂಸ್ಥೆ: ನವಂಬರ್-2020ರ ಅಂತ್ಯಕ್ಕೆ ಪ್ರತಿ ದಿನ 3939 ಅನುಸೂಚಿ /ಬಸ್‌ಗಳನ್ನು ಪುನರಾರಂಭಿಸಲಾಗಿದೆ.
</td></tr>
</table>

| | | |
|---|---|---|
| | | ದಿನದಿಂದ ದಿನಕ್ಕೆ ಬೇಡಿಕೆಗೆ ಅನುಗುಣವಾಗಿ ಸಾರಿಗೆಗಳನ್ನು ಹಂತ-ಹಂತವಾಗಿ ಹೆಚ್ಚಿಸಿ ಕಾರ್ಯಾಚರಿಸಲಾಗುತ್ತಿದೆ.<br><br>ಪ್ರಯಾಣಿಕರಿಂದ ಬೇಡಿಕೆ ಇಲ್ಲದೇ ಬಸ್ ನಿಲ್ದಾಣಗಳಲ್ಲಿ ಜನಸಂದಣಿ ವಿರಳವಾಗಿರುವ, ಪ್ರವಾಸಿ ತಾಣಗಳು ಹಾಗೂ ಧಾರ್ಮಿಕ ಕೇಂದ್ರಗಳಿಗೆ ಪ್ರಯಾಣಿಸಲು ಪ್ರಯಾಣಿಕರು ಕಡಿಮೆ ಇರುವ, ಕಾರ್ಖಾನೆ/ಕಂಪನಿಗಳ ಉದ್ಯೋಗಿಗಳಿಗೆ ಮನೆಯಿಂದ ಕೆಲಸ ಮಾಡಲು ಅವಕಾಶ ನೀಡಿರುವ ಕಾರಣ ಹಾಗೂ ಶಾಲಾ-ಪದವಿ ಪೂರ್ವ ಕಾಲೇಜುಗಳು ಪುನಃ ಆರಂಭವಾಗದ ಮತ್ತು ಹವಾನಿಯಂತ್ರಿತ(ಎ/ಸಿ) ಬಸ್ಸುಗಳಿಗೆ ಕಡಿಮೆ ಬೇಡಿಕೆ ಇರುವ ಕಾರಣ, ಪೂರ್ಣ ಪ್ರಮಾಣವಾಗಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದಾಗ್ಯೂ, ಪ್ರಯಾಣಿಕರ ದಟ್ಟಣೆ ಮತ್ತು ಅವಶ್ಯಕತೆ ಅನುಗುಣವಾಗಿ ಬಸ್ಸುಗಳ ಸಂಖ್ಯೆಯನ್ನು ಹೆಚ್ಚಿಸಲಾಗುತ್ತಿದೆ. |
| ಇ. | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರರಿಗೆ ಕಳೆದ ಮೂರು-ನಾಲ್ಕು ತಿಂಗಳುಗಳಿಂದ ವೇತನವನ್ನು ನೀಡದೇ ನೌಕರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಾರಿಗೆ ಸಂಸ್ಥೆಗಳು ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವುದರಿಂದ, ಸಾರಿಗೆ ಸಂಸ್ಥೆಗಳ ನೌಕರರಿಗೆ ಮಾಸಿಕ ವೇತನವನ್ನು ಸಕಾಲದಲ್ಲಿ ಪಾವತಿಸಲು ಅಗತ್ಯ ಸಂಪನ್ಮೂಲದ ಕೊರತೆ ಇದ್ದುದರಿಂದ, ವೇತನದ ವೆಚ್ಚವನ್ನು ಪಾವತಿಸಲು ಸರ್ಕಾರದಿಂದ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿದೆ.<br><br>ಈಗಾಗಲೇ ಏಪ್ರಿಲ್-2020 ರಿಂದ ಅಕ್ಟೋಬರ್ 2020ರವರೆಗಿನ ಮಾಹೆಯ ವೇತನವನ್ನು ಪಾವತಿ ಮಾಡಲಾಗಿದೆ ಹಾಗೂ ನವೆಂಬರ್ 2020 ಮಾಹೆಯ ವೇತನವನ್ನು ಪಾವತಿ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.<br><br>ನಾಲ್ಕೂ ಸಾರಿಗೆ ಸಂಸ್ಥೆಗಳ ಅಧಿಕಾರಿ/ನೌಕರರ ಏಪ್ರಿಲ್-2020 ರಿಂದ ನವೆಂಬರ್-2020 ಮಾಹೆಯವರೆಗಿನ ವೇತನ ಪಾವತಿಗಾಗಿ ಸರ್ಕಾರದಿಂದ ಒಟ್ಟು ರೂ.1782.71 ಕೋಟಿಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿದೆ. |
| ಉ. | ಬಂದಿದ್ದಲ್ಲಿ, ನೌಕರರಿಗೆ ಯಾವಾಗ ವೇತನವನ್ನು ನೀಡಲಾಗುವುದು; | |
| ಊ. | ವೇತನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ: ಟಿಡಿ 211 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

# ಕರ್ನಾಟಕ ವಿಧಾನಸಭೆ

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 865 |
| ಸದಸ್ಯರ ಹೆಸರು | : | ಶ್ರೀ.ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) |
| ಉತ್ತರಿಸುವ ದಿನಾಂಕ | : | 09.12.2020 |
| ಉತ್ತರಿಸುವ ಸಚಿವರು | : | ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು, ತುರಕರಶೀಗಿಹಳ್ಳಿ ಮತ್ತು ಸವದತ್ತಿ ತಾಲ್ಲೂಕಿನ ಹಿರೆಬೂದನೂರು ಗ್ರಾಮಗಳಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ, ಪ್ರಾಥಮಿಕ ಪಶುಚಿಕಿತ್ಸಾಲಯ ಪ್ರಾರಂಭಿಸುವ ಕುರಿತು ಇಲ್ಲಿನ ರೈತರು ಹಾಗೂ ಜನಪ್ರತಿನಿಧಿಗಳು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೇ; | ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೆಬೂದನೂರು ಗ್ರಾಮಕ್ಕೆ ನೂತನ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ ಮಂಜೂರು ಮಾಡುವಂತೆ ಮನವಿ ಸ್ವೀಕೃತಗೊಂಡಿರುತ್ತದೆ. ಆದರೆ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಯಾವುದೇ ಯೋಜನೆ ಇರುವುದಿಲ್ಲ.<br><br>ಮುಂದುವರೆದು, ರಾಷ್ಟ್ರೀಯ ಕೃಷಿ ಆಯೋಗದ ನೀತಿಯಂತೆ ಪ್ರತಿ 5000 ಜಾನುವಾರು ಘಟಕಕ್ಕೆ ಒಂದು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರದ ಅವಶ್ಯಕತೆಯಿರುತ್ತದೆ. ಆದರೆ ಕೆಂಗಾನೂರು ಸಮೂಹ ಗ್ರಾಮಗಳಲ್ಲಿ 1506, ತುರಕರಶೀಗಿಹಳ್ಳಿ ಸಮೂಹ ಗ್ರಾಮಗಳಲ್ಲಿ 1796 ಹಾಗೂ ಹಿರೆಬೂದನೂರು ಸಮೂಹ ಗ್ರಾಮಗಳಲ್ಲಿ 2704 ಜಾನುವಾರು ಘಟಕಗಳಿದ್ದು, ಈ ಗ್ರಾಮಗಳ ಜಾನುವಾರು ಆರೋಗ್ಯ ರಕ್ಷಣೆಗೆ ಮತ್ತು ಚಿಕಿತ್ಸೆಗೆ ಸಮೀಪದ ಪಶುವೈದ್ಯ ಸಂಸ್ಥೆಗಳಿಂದ ಸೂಕ್ತ ವ್ಯವಸ್ಥೆ ಮಾಡಲಾಗಿರುತ್ತದೆ. |

| | | |
|---|---|---|
| ಇ) | ಹಾಗಿದ್ದಲ್ಲಿ, ಈ ಗ್ರಾಮಗಳಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಿ, ಇಲ್ಲಿನ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರವು ಕ್ರಮಕೈಗೊಳ್ಳುವುದೇ? | ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಯಾವುದೇ ಯೋಜನೆ ಇರುವುದಿಲ್ಲ. |

ಸಂ: ಪಸಂಮೀ ಇ-191 ಪಸಸೇ 2020

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು

(74)

# ಕರ್ನಾಟಕ ವಿಧಾನ ಸಭೆ

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 717 |
| ಸದಸ್ಯರ ಹೆಸರು | : | ಶ್ರೀ ಖಾದರ್ ಯು.ಟಿ. (ಮಂಗಳೂರು) |
| ಉತ್ತರಿಸುವ ದಿನಾಂಕ | : | 09.12.2020 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರೇತರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಡೆಸುತ್ತಿರುವ ಸಾಂತ್ವನ ಕೇಂದ್ರಗಳಿಗೆ, 2020-21ನೇ ಸಾಲಿನಲ್ಲಿ ಅನುದಾನವನ್ನು ಬಿಡುಗಡೆ ಮಾಡದಿರುವುದು ಸರ್ಕಾರದ ಗಮನದಲ್ಲಿದೆಯೇ; | ಬಂದಿದೆ. |
| ಆ) | ದೌರ್ಜನ್ಯಕ್ಕೆ ಒಳಗಾದ ಹೆಣ್ಣುಮಕ್ಕಳಿಗೆ ಸಾಂತ್ವನ ನೀಡುವ ತಾತ್ಕಾಲಿಕ ಆಶ್ರಯ, ರಕ್ಷಣೆ ನೀಡುವ ಸಾಂತ್ವನ ಕೇಂದ್ರಗಳನ್ನು ಮುಂದುವರಿಸಿಕೊಂಡು ಹೋಗಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ) ಕೇಂದ್ರಗಳನ್ನು ಪ್ರಾರಂಭಿಸಿರುವುದರಿಂದ 2020-21ನೇ ಸಾಲಿನಿಂದ ಸಾಂತ್ವನ ಯೋಜನೆಯನ್ನು ಸ್ಥಗಿತಗೊಳಿಸಲು ತೀರ್ಮಾನಿಸಲಾಗಿತ್ತು. ಆದರೆ, ಒನ್ ಸ್ಟಾಪ್ ಸೆಂಟರ್ ಗಳನ್ನು ಜಿಲ್ಲಾ ಕೇಂದ್ರಗಳಿಗೆ ಮಾತ್ರ ಸ್ಥಾಪಿಸಿದ್ದು, ನೊಂದ ಮಹಿಳೆಯರು ಜಿಲ್ಲಾ ಕೇಂದ್ರಗಳಿಗೆ ಭೇಟಿ ನೀಡಲು ಕಷ್ಟಕರವಾಗುವುದರಿಂದ ಸಾಂತ್ವನ ಕೇಂದ್ರಗಳನ್ನು ಮುಂದುವರೆಸುವ ಬಗ್ಗೆ ಪರಿಶೀಲಿಸಿ, ಸಾಂತ್ವನ ಯೋಜನೆಯನ್ನು ದಿನಾಂಕ:31.03.2021ರವರೆಗೆ ಮುಂದುರೆಸಲು ಅನುಮೋದನೆ ನೀಡಲಾಗಿದೆ. |
| ಇ) | ಸದರಿ ಕೇಂದ್ರಗಳ ನಿರ್ವಹಣೆಗೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? | 2020-21ನೇ ಸಾಲಿನಲ್ಲಿ ಯಾವುದೇ ಅನುದಾನ ನಿಗಧಿಪಡಿಸಿರುವುದಿಲ್ಲ. ಇಲಾಖೆಯ ಇತರೆ ಯೋಜನೆ ಅಡಿ ಉಳಿತಾಯವಾಗುವ ಅನುದಾನವನ್ನು ಪುನರ್ ವಿನಿಯೋಗ ಮಾಡಿಕೊಂಡು ಸಾಂತ್ವನ ಕೇಂದ್ರಗಳಿಗೆ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಪುನರ್ ವಿನಿಯೋಗ ಆದೇಶ ಬಂದ ಕೂಡಲೇ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು. |

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತುವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 120 ಮಮಅ 2020